# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **1632** |
| **ಮಾನ್ಯ ಸದಸ್ಯರ ಹೆಸರು** | : | **ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನ ಸಭೆಯಿಂದ ಚುನಾಯಿತರಾದವರು)** |
| **ಉತ್ತರಿಸಬೇಕಾದ ದಿನಾಂಕ** | : | **18.03.2026** |
| **ಉತ್ತರಿಸಬೇಕಾದ ಸಚಿವರು** | : | **ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು** |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲೆಯ ದೇವರ ಹಿಪ್ಪರಗಿ ತಾಲ್ಲೂಕಿನ ಜಾಲವಾದ ಗ್ರಾಮದಲ್ಲಿ ಪಶುಆಸ್ಪತ್ರೆ ನಿರ್ಮಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; ಇದ್ದಲ್ಲಿ ಯಾವ ಕಾಲಮಿತಿಯಲ್ಲಿ ಮಂಜೂರಾತಿಯನ್ನು ನೀಡಲಾಗುವುದು; (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು) | ವಿಜಯಪುರ ಜಿಲ್ಲೆಯ ದೇವರ ಹಿಪ್ಪರಗಿ ತಾಲ್ಲೂಕಿನ ಜಾಲವಾದ ಗ್ರಾಮದಲ್ಲಿ ಪಶುಆಸ್ಪತ್ರೆ ನಿರ್ಮಿಸಲು ಪ್ರಸ್ತಾವನೆ ಸ್ವೀಕೃತಗೊಂಡಿರುತ್ತದೆ.<br><br>ಆದ್ಯತೆ ಮತ್ತು ಅವಶ್ಯಕತೆಗೆ ಅನುಗುಣವಾಗಿ ಪರಿಶೀಲಿಸಲಾಗುವುದು. |
| ಆ) | ಸದರಿ ಗ್ರಾಮದಲ್ಲಿ ಜಾನುವಾರುಗಳು ಬಹುಸಂಖ್ಯೆಯಲ್ಲಿ ಇದ್ದು, ರೋಗರುಜಿನಗಳಿಗೆ ತುತ್ತಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು; | ವಿಜಯಪುರ ಜಿಲ್ಲೆಯ ದೇವರ ಹಿಪ್ಪರಗಿ ತಾಲ್ಲೂಕಿನ ಜಾಲವಾದ ಗ್ರಾಮದಲ್ಲಿ ಜಾನುವಾರುಗಳಲ್ಲಿ ರೋಗೋದ್ರೇಕ ಉಂಟಾಗಿರುವ ಬಗ್ಗೆ ವರದಿಯಾಗಿರುವುದಿಲ್ಲ. ಸದರಿ ಗ್ರಾಮದಲ್ಲಿ ಜಾನುವಾರುಗಳಲ್ಲಿ ರೋಗೋದ್ರೇಕಗಳನ್ನು ತಡೆಯಲು ಮುನ್ನೆಚ್ಚರಿಕೆ ಕ್ರಮವಾಗಿ ಲಸಿಕೆಗಳನ್ನು ಹಾಕಲಾಗಿದೆ. |
| ಇ) | ಹೊಸದಾಗಿ ಪಶುಆಸ್ಪತ್ರೆ ಮಂಜೂರಾತಿಗೆ ಯಾವ ಯಾವ ಗಣ್ಯವ್ಯಕ್ತಿಗಳು ಶಿಫಾರಸ್ಸು ಪತ್ರಗಳನ್ನು ನೀಡಿದ್ದಾರೆ; ಹೊಸದಾಗಿ ಪಶುಆಸ್ಪತ್ರೆ ಸ್ಥಾಪಿಸಲು ಬೇಕಾದ ಮಾನದಂಡಗಳು ಹಾಗೂ ಮೂಲ ಸೌಕರ್ಯಗಳು ಇದ್ದರು ಕೂಡಾ ವಿಳಂಬವಾಗಲು ಕಾರಣಗಳೇನು? (ಸಂಪೂರ್ಣ ವಿವರ ನೀಡುವುದು) | ಜಾಲವಾದ ಗ್ರಾಮದಲ್ಲಿ ನೂತನ ಪಶುಚಿಕಿತ್ಸಾಲಯ ಮಂಜೂರು ಮಾಡಲು ಮಾನ್ಯ ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನ ಸಭೆಯಿಂದ ಚುನಾಯಿತರದವರು) ರವರಿಂದ ಪ್ರಸ್ತಾವನೆ ಸ್ವೀಕೃತವಾಗಿದ್ದು, ಆದ್ಯತೆ ಮತ್ತು ಅವಶ್ಯಕತೆ ಅನುಗುಣವಾಗಿ ನೂತನ ಪಶುಚಿಕಿತ್ಸಾಲಯಗಳ ಮಂಜೂರಾತಿಗೆ ಪರಿಶೀಲಿಸಲಾಗುತ್ತಿದೆ. |

**ಸಂಖ್ಯೆ:ಪಸಂಮೀ 90 ಸಲೆವಿ 2026**

**(ಕೆ. ವೆಂಕಟೇಶ್)**
ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು